# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ


**ಸುಭಾಷಿತ:**

ತಿನ್ನುವ ಅನ್ನದ ಮೇಲೆ ಅಹಂಕಾರ ಪಟ್ಟರೆ,
ರೋಗ ರುಜಿನದಿಂದ ಬಳಲುತ್ತಾನೆ..
ಹೆಣ್ಣನ್ನು ತಿರಸ್ಕಾರ ಭಾವದಿಂದ ನೋಡಿದರೆ
ಬ್ರಹ್ಮಚಾರಿಯಾಗಿಯೇ ಉಳಿಯುತ್ತಾನೆ..
ಒದಗಿ ಬಂದ ಸಂಪತ್ತನ್ನು ಕಡೆಗಣಿಸಿದರೆ
ದರಿದ್ರನಾಗಿಯೇ ಇರುತ್ತಾನೆ..
ಕಾಯಕದ ಮೇಲೆ ಪ್ರೀತಿ ತೋರದಿದ್ದರೆ
ನಿರುದ್ಯೋಗಿಯಾಗಿಯೇ ಬಾಳುತ್ತಾನೆ..
ಕುಟುಂಬ ಸಂಸಾರದಲ್ಲಿ ಒಲವು ಇಲ್ಲದಿದ್ದರೆ
ಅನಾಥನಾಗಿಯೇ ಉಳಿಯುತ್ತಾನೆ.
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 27-09-2024 to 03-10-2024 ಬೆಲೆ: 7-00 ಸಂಪುಟ–4 ಸಂಚಿಕೆ–14 ಪುಟಗಳು–6









ಇತ್ತೀಚಿನ ದಿನಗಳಲ್ಲಿ ಮಂಗಳೂರು ಮಹಾ ನಗರದಲ್ಲಿ ಟ್ರಾಫಿಕ್ ಸಮಸ್ಯೆ ಹೆಚ್ಚಾಗುತ್ತಿದೆ. ಅದರಲ್ಲೂ ನಗರದ ನಂತೂರು, ಕೆ ಪಿ ಟಿಯಂತಹ ಜಂಕ್ಸನ್‌ಗಳಲ್ಲಿ ಜನರು ಹೈರಾಣಾಗುವುದು ಮಾಮೂಲಿಯಾಗುತ್ತಿದೆ. ಒಂದು ಕಡೆ ಇಂತಹ ರಸ್ತೆಗಳಲ್ಲಿ ಇರುವ ಗುಂಡಿಗಳು ಕೂಡ ಇದೆ ಕಾರಣ ಎನ್ನಬಹುದು. ಇಂತಹ ಟ್ರಾಫಿಕ್‌ನಲ್ಲಿ ಆಂಬುಲೆನ್ಸ್‌ಗಳು ಸಿಕ್ಕಿಹಾಕಿಕೊಂಡು ರೋಗಿಗಳು ಪರದಾಡುವ ಪರಿಸ್ಥಿತಿ ಏರ್ಪಡಾಗುತ್ತಿರುವುದು ನಿಜವಾಗಿ ಮನಕಲಕುವಂತಿರುತ್ತದೆ.

## ಗಾಳಿಯಲ್ಲಿ ಗುಂಡು ಹೊಡೆಯಬೇಡಿ –ಸಿಎಂ



ಬೆಂಗಳೂರು: ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಹುದ್ದೆಯನ್ನು ಎರಡುವರೆ ಸಾವಿರ ಕೋಟಿ ರೂಪಾಯಿಗಳಿಗೆ ಹರಾಜು ಹಾಕಿ ಹಣ ಪೀಕಿದ್ದಾರೆ ಎಂಬ ಆರೋಪವನ್ನು ಸ್ವಪಕ್ಷದ ನಾಯಕರಿಂದಲೇ ಎದುರಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ? ಮೋದಿಯವರೇ, ದೂರದ ಊರಲ್ಲಿ ಕೂತು ಗಾಳಿಯಲ್ಲಿ ಗುಂಡು ಹೊಡೆಯಬೇಡಿ, ನೇರಾ ನೇರ ಚರ್ಚೆ ಮಾಡಲು ನೀವು ಸಿದ್ಧ ಇದ್ದರೆ ನಾನು ಸದಾ ಸಿದ್ಧ ಎಂದು ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ. ತಮ್ಮ ಪಕ್ಷದ ಮುಖ್ಯಮಂತ್ರಿ ಹುದ್ದೆಯನ್ನು ಮಾರಾಟ ಮಾಡಲಾಗಿದೆ ಎಂದು **3ನೇ ಪುಟಕ್ಕೆ**

## ಹರಿಯಾಣದಲ್ಲೂ ಸದ್ದು ಮಾಡಿದ ಮುಡಾ ಪ್ರಕರಣ



ಹರಿಯಾಣ: ಹರಿಯಾಣದ ಸೋನಿಪತ್ ರ‍್ಯಾಲಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರವಿದೆ ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ. ಅಷ್ಟೆ ಅಲ್ಲ ಇಂದು ಜನಪ್ರತಿನಿಧಿಗಳ ಕೋರ್ಟ್ ಸಿಎಂ ವಿರುದ್ಧ ತನಿಖೆಗೆ ಆದೇಶಿಸಿದೆ ಎಂಬ ವಿಚಾರದ ಬಗ್ಗೆ ಪ್ರಧಾನಿ ಮೋದಿ ಮಾತನಾಡಿ ಗಮನ ಸೆಳೆದಿದ್ದಾರೆ. ಕಾಂಗ್ರೆಸ್ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಹರಿಯಾಣ ವಿಧಾನಸಭೆ ಚುನಾವಣೆಯ ಪ್ರಚಾರ ಸಭೆಯಲ್ಲಿ ಆರೋಪಿಸಿದ್ದಾರೆ. ಕರ್ನಾಟಕದಲ್ಲಿ ಕಾಂಗ್ರೆಸ್ ಆಡಳಿತಕ್ಕೆ ಬಂದು ಒಂದೂವರೆ ವರ್ಷಗಳಾಗಿದೆ. ಅಷ್ಟರಲ್ಲೇ ಅಲ್ಲಿನ ಮುಖ್ಯಮಂತ್ರಿ ಭೂ ಹಗರಣದ ಆರೋಪ ಎದುರಿಸುತ್ತಿದ್ದಾರೆ. ರಾಜ್ಯಪಾಲರು ನೀಡಿದ್ದ ಪ್ರಾಸಿಕ್ಯೂಷನ್ ಅನುಮತಿ ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾ ಮಾಡಿದೆ. ಪ್ರಕರಣದಲ್ಲಿ ಸೂಕ್ತ ತನಿಖೆ ಅಗತ್ಯ ಎಂದು ನ್ಯಾಯಾಲಯ ಹೇಳಿದೆ ಎಂದು ಮೋದಿ ಜನರ ಗಮನಕ್ಕೆ ತರುವ ಪ್ರಯತ್ನ ಮಾಡಿದ್ದಾರೆ. ಕಾಂಗ್ರೆಸ್‌ಗಿಂತ ದೊಡ್ಡ ಭ್ರಷ್ಟ ಪಕ್ಷ ಇನ್ನೊಂದಿಲ್ಲ. ಕಾಂಗ್ರೆಸ್ ಕಾಲಿಟ್ಟಲ್ಲೆಲ್ಲಾ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತ ಖಚಿತ ಎಂದು ಟೀಕಾಪ್ರಹಾರ ನಡೆಸಿದರು.

## ರಾಜೀನಾಮೆ ಕೊಡುವುದು ಉತ್ತಮ: ನ್ಯಾ. ಹೆಗ್ಡೆ



ಮಂಗಳೂರು: ಸಾರ್ವಜನಿಕರ ದೃಷ್ಟಿಯಿಂದ ನೋಡಿದರೆ ಸಿದ್ದರಾಮಯ್ಯ ಸಿ ಎಂ ಸ್ಥಾನಕ್ಕೆ ರಾಜೀನಾಮೆ ಕೊಡಬೇಕೆನ್ನುವುದು ನನ್ನ ಅನಿಸಿಕೆ. ಆದರೆ ರಾಜೀನಾಮೆ ಕೊಡುವುದು, ಬಿಡುವುದು ಅವರಿಗೆ ಬಿಟ್ಟದ್ದು. ಕೊಡದಿದ್ದರೆ ಕಾನೂನಿನಲ್ಲಿ ತಪ್ಪಿಲ್ಲ. ಎಂದು ನಿವೃತ್ತ ಲೋಕಾಯುಕ್ತ ನ್ಯಾ. ಸಂತೋಷ್ ಹೆಗ್ಡೆ ಅಭಿಪ್ರಾಯ ಪಟ್ಟಿದ್ದಾರೆ. ಮಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ತನಿಖೆಗೆ ಅನುಮೋದನೆ ಕೊಟ್ಟದ್ದು ಮೂಡಾ ವಿಚಾರದಲ್ಲಿ ಮಾತ್ರ. ಆದರೆ ಈ ವಿಚಾರದಲ್ಲಿ **3ನೇ ಪುಟಕ್ಕೆ**






## ಸುದ್ದಿ ತುಣುಕು

ತನಗೆ ನ್ಯಾಯ ನೀಡುವಂತೆ ಕಣ್ಣು ಕಾಣದ 79 ವಯಸ್ಸಿನ ಅಜ್ಜಿಯೊಬ್ಬರು ದಯಾಮರಣ ಅರ್ಜಿ ಪತ್ರದೊಂದಿಗೆ ಆನೇಕಲ್ ತಾಲೂಕು ಪಂಚಾಯಿತಿಗೆ ಆಗಮಿಸಿದ ನಡೆದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ದಿಢೀರ್ ವಿಧಾನಸೌಧ ಮುತ್ತಿಗೆ ಹಾಕಿದ ಬಿಜೆಪಿ ನಾಯಕರು, ವಿಧಾನಸೌಧದ ದ್ವಾರಕ್ಕೆ ಬೀಗ ಜಡಿಯಲು ಮುಂದಾಗಿದ್ದರಿಂದ ಹೈಡ್ರಾಮಾ ನಡೆಯಿತು. ಕೂಡಲೇ ಎಲ್ಲ ನಾಯಕರನ್ನು ಪೊಲೀಸರು ವಶಕ್ಕೆ ಪಡೆದು ಪರಿಸ್ಥಿತಿ ನಿಯಂತ್ರಿಸಿದರು.

ಕಿತ್ತೂರು ಉತ್ಸವಕ್ಕೆ ರಾಷ್ಟ್ರಮಟ್ಟದಲ್ಲಿ ಪ್ರಚಾರ ಸಿಗುವ ನಿಟ್ಟಿನಲ್ಲಿ ಈ ಬಾರಿಯ ಕಿತ್ತೂರು ಉತ್ಸವ ಕಾರ್ಯಕ್ರಮಕ್ಕೆ ರಾಷ್ಟ್ರಪತಿ ಮುರ್ಮು ಅವರನ್ನು ಆಹ್ವಾನಿಸುವಂತೆ ಕಿತ್ತೂರಿನ ರಾಜ ಗುರು ಸಂಸ್ಥಾನ ಕಲ್ಮಠದ ಮಡಿವಾಳ ರಾಜ ಯೋಗಿಂದ್ರ ಸ್ವಾಮೀಜಿ ಹೇಳಿದರು.

ದರ್ಶನ್ ಪರ ಆಡಿಟರ್ ಬಳ್ಳಾರಿ ಜೈಲಿಗೆ ಭೇಟಿ ಕೊಟ್ಟಿದ್ದು, ಐಟಿ ಅಧಿಕಾರಿಗಳಿಗೆ ಬೇಕಾದ ದಾಖಲಾತಿ ಮತ್ತು ಮಾಹಿತಿಯನ್ನು ಆಡಿಟರ್ ಹಂಚಿಕೊಳ್ಳಲಿದ್ದಾರೆ.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ ನೇತೃತ್ವದಲ್ಲಿ ಮೈಸೂರು ಜಿಲ್ಲಾಧಿಕಾರಿಗಳು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಾಡ ಹಬ್ಬ ದಸರಾಗೆ ಆಹ್ವಾನಿಸಿದರು.

53,342 ಅನರ್ಹ ಬಿಪಿಲ್ ಕಾರ್ಡ್‌ಗಳನ್ನು ಶಿವಮೊಗ್ಗ ಜಿಲ್ಲೆಯೊಂದರಲ್ಲೇ ಪತ್ತೆ ಹಚ್ಚಲಾಗಿದ್ದು, ಇನ್ನಷ್ಟು ಅನರ್ಹ ಪಡಿತರ ಚೀಟಿಗಳನ್ನು ಗುರುತಿಸುವ ಕಾರ್ಯ ನಡೆಯುತ್ತಿದೆ.

ಗುತ್ತಿಗೆ ನೌಕರರ ಒಪ್ಪಂದವನ್ನು ಅಂತಿಮಗೊಳಿಸುವ ಮುನ್ನ ಅವರ ಅಹವಾಲುಗಳನ್ನು ಆಲಿಸಬೇಕು ಎಂದು ಹೆಚ್‌ಎಎಲ್‌ಗೆ ಹೈಕೋರ್ಟ್ ತಿಳಿಸಿದೆ.

ರಾಜ್ಯದಲ್ಲಿ ಮುಂಗಾರು ಮಳೆ ಕೊನೆಗೊಳ್ಳಲು ಕೆಲವೇ ದಿನಗಳು ಮಾತ್ರ ಬಾಕಿ ಉಳಿದಿದ್ದು, ಇದರ ನಡುವೆ ಭಾರಿ ಮಳೆಯಾಗಲಿದೆ. ಈ ಹಿನ್ನಲೆಯಲ್ಲಿ ಹಲವು ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಿದೆ.

ಕುಮಾರಸ್ವಾಮಿ ರಾಜೀನಾಮೆ ಕೊಟ್ಟರಾ? ಎಂದು ಕೇಳಿದ್ದ ಸಿಎಂ ಸಿದ್ದರಾಮಯ್ಯನವರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿರುಗೇಟು ಕೊಟ್ಟಿದ್ದು,"ನನ್ನ ಮೇಲಿನ ಪ್ರಕರಣಗಳಿಗೂ ನಿಮ್ಮ ಹಗರಣಕ್ಕೂ ವ್ಯತ್ಯಾಸವಿದೆ" ಎಂದಿದ್ದಾರೆ.

ವಾರದಲ್ಲಿ 2 ದಿನ ನೀಡುತ್ತಿದ್ದ ಮೊಟ್ಟೆಯನ್ನು ಇನ್ನು ಮುಂದೆ 6 ದಿನವೂ ನೀಡಬೇಕು ಎಂದು ಸಚಿವ ಸಚಿವ ಡಾ.ಎಚ್.ಸಿ ಮಹದೇವಪ್ಪ ಅವರು ಹೇಳಿದ್ದಾರೆ.

ಕಚ್ಚಾ ತೈಲ ಬೆಲೆಗಳು ಈಗಿರುವಂತೆ ಸ್ಥಿರವಾಗಿದ್ದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಇಳಿಕೆಯಾಗುವ ಸಾಧ್ಯತೆಗಳಿವೆ ಎಂದು ಐಸಿಆರ್‌ಎ ಹೇಳಿದೆ.

ಬೊಕರೊದಲ್ಲಿ ಗೂಡ್ಸ್ ರೈಲಿನ ಎರಡು ಬೋಗಿಗಳು ಹಳಿ ತಪ್ಪಿವೆ. ಇದರಿಂದ ಇತರೆ ರೈಲು ಸಂಚಾರದಲ್ಲಿ ವ್ಯತ್ಯಯ ಉಂಟಾಗಿದ್ದು, 15 ರೈಲುಗಳ ಮಾರ್ಗಗಳನ್ನು ಬದಲಾಯಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಉದ್ಯೋಗಕ್ಕಾಗಿ ಹಣ ಪಡೆದ ಹಗರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ)ದಿಂದ ಬಂಧನಕ್ಕೊಳಗಾಗಿದ್ದ ತಮಿಳುನಾಡಿನ ಮಾಜಿ ಸಚಿವ ವಿ.ಸೆಂಥಿಲ್ ಬಾಲಾಜಿ ಅವರಿಗೆ ಸುಪ್ರೀಂ ಕೋರ್ಟ್ ಜಾಮೀನು ನೀಡಿದೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಬುಧವಾರ 2ನೇ ಹಂತದ ಮತದಾನ ಮುಕ್ತಾಯಗೊಂಡಿದೆ. ಕಣಿವೆ ರಾಜ್ಯದಲ್ಲಿ ಶೇ.75ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

## ಪತೋಲಿ



**ಬೇಕಾಗುವ ಸಾಮಗ್ರಿಗಳು :**
ಅಕ್ಕಿ – 250 ಗ್ರಾಂ
ಅರಿಶಿನದ ಎಲೆ – 10 ರಿಂದ 15
ಬೆಲ್ಲ – 250 ಗ್ರಾಂ
ತೆಂಗಿನ ಕಾಯಿ ತುರಿ – 1 ಕಪ್
ಉಪ್ಪು – ರುಚಿಗೆ ತಕ್ಕಷ್ಟು,
ಏಲಕ್ಕಿ – ಸ್ವಲ್ಪ

**ಮಾಡುವ ವಿಧಾನ :**
ಮೊದಲಿಗೆ ಅಕ್ಕಿಯನ್ನು ಸುಮಾರು ನಾಲ್ಕರಿಂದ ಐದು ತಾಸು ನೀರಿನಲ್ಲಿ ನೆನೆಸಿಟ್ಟು, ನಂತರ ಅಕ್ಕಿಗೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ನುಣ್ಣಗೆ ಗಟ್ಟಿಯಾಗಿ ರುಬ್ಬಿಕೊಳ್ಳಬೇಕು. ನಂತರ ಅರಿಶಿನದ ಎಲೆಗಳನ್ನು ಎರಡೂ ಕಡೆ ಚೆನ್ನಾಗಿ ತೊಳೆದು ಶುಚಿಗೊಳಿಸಿಕೊಂಡು ಎಲೆಯ ತುದಿಯನ್ನು ಕತ್ತರಿಸಿಕೊಳ್ಳಬೇಕು. ನಂತರ ಬೆಲ್ಲವನ್ನು ಚೆನ್ನಾಗಿ ಪುಡಿಮಾಡಿ ಅದಕ್ಕೆ ತೆಂಗಿನ ಕಾಯಿಯ ಜೊತೆಗೆ ಏಲಕ್ಕಿ ಪುಡಿಯನ್ನು ಮಿಶ್ರಣ ಮಾಡಿ ಕಲಸಿಕೊಳ್ಳಬೇಕು, ನೀರಿನ ಅವಶ್ಯಕತೆ ಇರುವುದಿಲ್ಲ. ಈಗ ಇಡ್ಲಿ ಮಾಡುವ ಪಾತ್ರೆಗೆ ನೀರು ಹಾಕಿ ಹಬೆ ಆರಂಭವಾಗುತ್ತಿದ್ದಂತೆ ರುಬ್ಬಿದ ಮಿಶ್ರಣವನ್ನು ಎಲೆಗಳಿಗೆ ಹಚ್ಚಬೇಕು, ಹಚ್ಚಿದಾಗ ಸೋರುವ ಹಾಗಿರಬಾರದು ಈಗ ಹಿಟ್ಟಿನ ಮೇಲೆ ಕಾಯಿಬೆಲ್ಲ ಕಾಯಿ ಎಲೆಗಳನ್ನು ಮಡಚಿ ಹಬೆ ಆಡುವ ಪಾತ್ರೆಯಲ್ಲಿ ಇಟ್ಟು 30 ನಿಮಿಷ ಬೇಯಿಸಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಪತೋಲಿ ಸವಿಯಲು ಸಿದ್ದ.

## ಚೀನಾದಲ್ಲಿ ರಷ್ಯಾ ರಹಸ್ಯ ಡ್ರೋನ್ ಯೋಜನೆ !



ಥರಷ್ಯಾ : ರಷ್ಯಾ ತನ್ನ ಶಸ್ತ್ರಾಸ್ತ್ರ ಉತ್ಪಾದನೆಯನ್ನು ಚೀನಾಕ್ಕೆ ವರ್ಗಾಯಿಸುತ್ತಿದೆಯೇ ಎಂಬ ಅನುಮಾನ ಬಲಗೊಳ್ಳುತ್ತಿವೆ. ಇತ್ತೀಚೆಗೆ, ಯುರೋಪಿಯನ್ ಗುಪ್ತಚರ ಮೂಲಗಳು ಚೀನಾದಲ್ಲಿ ರಷ್ಯಾ ಅತ್ಯಾಧುನಿಕ ಡ್ರೋನ್ ಉತ್ಪಾದನಾ ಯೋಜನೆಯನ್ನು ಸ್ಥಾಪಿಸಿದೆ ಎಂದು ಹೇಳಿವೆ. ಈ ವಿಚಾರವನ್ನು ಆಂಗ್ಲ ಮಾಧ್ಯಮ ಸಂಸ್ಥೆಯೊಂದು ವರದಿ ಮಾಡಿದೆ. ರಷ್ಯಾದ ಸರ್ಕಾರಿ ಸ್ವಾಮ್ಯದ ಅಲ್ಮಾಜ್-ಆಂಟೆಯ ಅಂಗಸಂಸ್ಥೆಯಾದ IEMZ ಕುಪೋಲ್, ಇತ್ತೀಚೆಗೆ ಚೀನಾದಲ್ಲಿ ಇತ್ತೀಚಿನ ಮಾದರಿ ಗಾರ್ಪಿಯಾ-3 ಡ್ರೋನ್ ಪರೀಕ್ಷಿಸಿದೆ.

## ಸಂಘರ್ಷ ಕೊನೆಗೊಳಿಸುವಂತೆ ವಿಶ್ವರಾಷ್ಟ್ರಗಳ ಒತ್ತಾಯ



ನ್ಯೂಯಾರ್ಕ್: ಕದನವಿರಾಮ ಮಾತುಕತೆಗಳಿಗೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಇಸ್ರೇಲ್ ಮತ್ತು ಹಿಜ್ಬುಲ್ಲಾ ಎರಡೂ ಬಣಗಳು ತಮ್ಮ ಮಧ್ಯದ ಸಂಘರ್ಷವನ್ನು 21 ದಿನಗಳ ಕಾಲ ನಿಲ್ಲಿಸಬೇಕೆಂದು ಅಮೆರಿಕ, ಫ್ರಾನ್ಸ್ ಮತ್ತು ಇತರ ಮಿತ್ರರಾಷ್ಟ್ರಗಳು ಜಂಟಿಯಾಗಿ ಕರೆ ನೀಡಿವೆ. ಇತ್ತೀಚಿನ ದಿನಗಳಲ್ಲಿ ಲೆಬನಾನ್ ಮೇಲೆ ಇಸ್ರೇಲ್ ನಡೆಸುತ್ತಿರುವ ದಾಳಿಗಳಲ್ಲಿ ಈಗಾಗಲೇ 600 ಜನ ಸಾವಿಗೀಡಾಗಿದ್ದು, ಸಾವಿರಾರು ಮಂದಿ ಗಾಯಗೊಂಡಿರುವ ಹಿನ್ನೆಲೆಯಲ್ಲಿ ಈ ಕರೆ ಮಹತ್ವ ಪಡೆದುಕೊಂಡಿದೆ.

## ಉತ್ತರ ಕೊರಿಯಾ ಚೆಲ್ಲಾಟ : ದಕ್ಷಿಣ ಕೊರಿಯಾಗೆ ಪ್ರಾಣಸಂಕಟ



ದಕ್ಷಿಣ ಕೊರಿಯಾ : ಮೊದಲಿಗೆ, ಉತ್ತರ ಕೊರಿಯಾ ಕಳುಹಿಸಿದ ಕಸದ ಬಲೂನ್‌ಗಳು 'ಸಣ್ಣ ಸಮಸ್ಯೆ' ಎಂದು ದಕ್ಷಿಣ ಕೊರಿಯಾ ಭಾವಿಸಿತ್ತು. ಆದರೆ ಇದೀಗ ಬಹುದೊಡ್ಡ ಸಮಸ್ಯೆಯಾಗಿ ಬದಲಾಗುತ್ತಿದೆ. ಶೀಘ್ರದಲ್ಲೇ ದಕ್ಷಿಣ ಕೊರಿಯಾದ ವಾಯುಯಾನ ಉದ್ಯಮಕ್ಕೆ ದೊಡ್ಡ ಹೊಡೆತ ಬೀಳುವ ಸಾಧ್ಯತೆ ಗೋಚರಿಸಿದೆ. ಏಕೆಂದರೆ, ಈಗಾಗಲೇ ಹಲವು ಬಾರಿ ರಾಜಧಾನಿ ಸಿಯೋಲ್‌ನಲ್ಲಿರುವ ಎರಡು ಪ್ರಮುಖ ವಿಮಾನ ನಿಲ್ದಾಣಗಳ ರನ್‌ವೇಗಳನ್ನೇ ಮುಚ್ಚಲಾಗಿದೆ.

## ಕಮಲಾ ಹ್ಯಾರಿಸ್ ಕಚೇರಿ ಮೇಲೆ ಗುಂಡಿನ ದಾಳಿ



ನ್ಯೂಯಾರ್ಕ್: ನವೆಂಬರ್‌ನಲ್ಲಿ ಅಮೆರಿಕದಲ್ಲಿ ಅಧ್ಯಕ್ಷೀಯ ಚುನಾವಣೆ ನಡೆಯಲಿದೆ. ಹಾಲಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮತ್ತು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಭ್ಯರ್ಥಿಗಳಾಗಿ ಕಣದಲ್ಲಿದ್ದಾರೆ. ಚುನಾವಣೆ ಸಮೀಪಿಸುತ್ತಿದ್ದಂತೆ ಅಹಿತಕರ ಘಟನಾವಳಿಗಳು ತೀವ್ರವಾಗುತ್ತಿವೆ. ತಡರಾತ್ರಿ ಕಮಲಾ ಹ್ಯಾರಿಸ್ ಪಕ್ಷದ ಪ್ರಚಾರ ಕಚೇರಿ ಮೇಲೆ ಅಪರಿಚಿತರು ಗುಂಡಿನ ದಾಳಿ ನಡೆಸಿದ್ದಾರೆ. ಅರಿಜೋನಾದ ಡೆಮಾಕ್ರಟಿಕ್ ಪಕ್ಷದ ಪ್ರಚಾರ ಕಚೇರಿ ಮೇಲೆ ಅಪರಿಚಿತ ವ್ಯಕ್ತಿಗಳು ಗುಂಡು ಹಾರಿಸಿದರು.

## ಶ್ರೀಲಂಕಾದ ಹೊಸ ಅಧ್ಯಕ್ಷರಿಗೆ ದೊಡ್ಡ ಸವಾಲು



ಶ್ರೀಲಂಕಾ: ಶ್ರೀಲಂಕಾದ ಹೊಸ ಅಧ್ಯಕ್ಷರಾಗಿ ಅನುರಾ ಕುಮಾರ ದಿಸ್ಸಾನಾಯಕೆ ಅವರ ಆಯ್ಕೆಯು ಅನೇಕರನ್ನು ಆಶ್ಚರ್ಯಗೊಳಿಸಿದೆ. ಇದು ದೇಶದ ರಾಜಕೀಯ ಭೂದೃಶ್ಯವನ್ನು ಮರುರೂಪಿಸುವಂಥ ಸಂದರ್ಭವಾಗಿದೆ. ಯುಎಸ್‌ನ ಮಾಜಿ ಭಾರತೀಯ ರಾಯಭಾರಿ ಮತ್ತು ವಿದೇಶಾಂಗ ವ್ಯವಹಾರಗಳ ತಜ್ಞ ಟಿ.ಪಿ.ಶ್ರೀನಿವಾಸನ್ ಈ ಬಗ್ಗೆ ಮಾತನಾಡಿ ದಿಸ್ಸಾನಾಯಕೆ ಅವರ ಗೆಲುವು ಶ್ರೀಲಂಕಾದ ರಾಜಕೀಯದಲ್ಲಿ ಮಹತ್ವದ ಬದಲಾವಣೆಯನ್ನು ಸೂಚಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಪಾಕಿಸ್ಥಾನಕ್ಕೆ ಸೌದಿ ಅರೇಬಿಯಾ ಎಚ್ಚರಿಕೆ



ಇಸ್ಲಾಮಾಬಾದ್: ಉಮ್ರಾ ಮತ್ತು ಹಜ್ ವೀಸಾದಡಿ ಭಿಕ್ಷುಕರು ಸೌದಿ ಅರೇಬಿಯಾಕ್ಕೆ ಬರುತ್ತಿರುವ ಬಗ್ಗೆ ಗಂಭೀರವಾಗಿ ಮತ್ತು ತುರ್ತಾಗಿ ಗಮನ ಹರಿಸುವಂತೆ ಸೌದಿ ಅರೇಬಿಯಾ ಪಾಕಿಸ್ಥಾನಕ್ಕೆ ಎಚ್ಚರಿಕೆ ನೀಡಿದೆ. ಇಂಥ ಜನರಿಗೆ ವೀಸಾ ನೀಡದಂತೆ ಹಾಗೂ ಇವರು ಭಿಕ್ಷಾಟನೆಗಾಗಿ ತನ್ನ ದೇಶ ಪ್ರವೇಶಿಸದಂತೆ ತಡೆಯಬೇಕು ಎಂದು ಇಸ್ಲಾಮಾಬಾದ್‌ನ ಧಾರ್ಮಿಕ ವ್ಯವಹಾರಗಳ ಸಚಿವಾಲಯಕ್ಕೆ ಸೌದಿ ಅರೇಬಿಯಾ ಸೂಚನೆ ನೀಡಿದೆ. ದೇಶದಲ್ಲಿ ಭಿಕ್ಷೆ ಬೇಡುತ್ತಿದ್ದ ಹಲವಾರು ಪಾಕಿಸ್ಥಾನಿ ಪ್ರಜೆಗಳನ್ನು ಬಂಧಿಸಿ ಗಡೀಪಾರು ಮಾಡಿರುವ ಸೌದಿ ಸರ್ಕಾರ ಪಾಕಿಸ್ಥಾನಕ್ಕೆ ಈ ಎಚ್ಚರಿಕೆ ನೀಡಿದೆ.

## ಇಟಲಿಯಲ್ಲಿ ಮಿಂಚಿದ ಹುಬ್ಬಳ್ಳಿ ಹುಡುಗಿ



ಹುಬ್ಬಳ್ಳಿ: ಹುಬ್ಬಳ್ಳಿಯ ಯುವ ಸ್ಕೇಟರ್ ತ್ರಿಷಾ ಪ್ರವೀಣ್ ಜಡಲಾ, ಇಟಲಿಯಲ್ಲಿ ನಡೆದ ಪ್ರತಿಷ್ಠಿತ ವಿಶ್ವ ಸ್ಕೇಟಿಂಗ್ ಕ್ರೀಡಾಕೂಟದಲ್ಲಿ ಕಂಚಿನ ಪದಕ ಗೆಲ್ಲುವ ಮೂಲಕ ವಾಣಿಜ್ಯ ನಗರಿ ಹುಬ್ಬಳ್ಳಿ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಈ ಅದ್ಭುತ ಸಾಧನೆ ಮಾಡಿದ ಹುಬ್ಬಳ್ಳಿಯ ಮೊದಲ ಮತ್ತು ಏಕೈಕ ಬಾಲಕಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾಳೆ. ಕಳೆದ ಒಂಬತ್ತು ವರ್ಷಗಳಿಂದ ಸ್ಕೇಟಿಂಗ್ ಅಭ್ಯಾಸ ಮಾಡುತ್ತಿರುವ ತ್ರಿಶಾ, ಈ ಹಂತವನ್ನು ತಲುಪಲು ಅವರ ನಿರಂತರ ಪರಿಶ್ರಮ, ಶಿಸ್ತು, ಅವರ ತರಬೇತುದಾರರು ಮತ್ತು ಕುಟುಂಬದ ಅಚಲ ಬೆಂಬಲಕ್ಕೆ ಸಾಕ್ಷಿಯಾಗಿದೆ.

## ಚೆಸ್ ಜಗತ್ತಿನಲ್ಲಿ ಭಾರತ ಐತಿಹಾಸಿಕ ಸಾಧನೆ



ಹಂಗೆರಿ : ಯುವ ಚೆಸ್ ತಾರೆಯರನ್ನೊಳಗೊಂಡ ಭಾರತದ ಪುರುಷ ಮತ್ತು ಮಹಿಳೆಯರ ತಂಡಗಳು 45ನೇ ಆವೃತ್ತಿಯ ಚೆಸ್ ಒಲಿಂಪಿಯಾಡ್‌ನಲ್ಲಿ ಭಾನುವಾರ ಚೊಚ್ಚಲ ಸ್ವರ್ಣ ಪದಕ ಜಯಿಸುವ ಮೂಲಕ ಐತಿಹಾಸಿಕ ಸಾಧನೆ ಮಾಡಿವೆ. ಪುರುಷರ ತಂಡ ಕೊನೆಯ ಸುತ್ತಿನ ಪಂದ್ಯದಲ್ಲಿ ಸ್ಲೋವೇನಿಯಾವನ್ನು 3.5–0.5ರಿಂದ ಮಣಿಸಿತು. ಮಹಿಳಾ ತಂಡ ನಿರ್ಣಾಯಕ ಸುತ್ತಿನಲ್ಲಿ ಅಜರ್‌ಬೈಜಾನ್ ವಿರುದ್ಧ 3.5–0.5 ಅಂತರದಿಂದ ಜಯ ಸಾಧಿಸಿ ಸ್ವರ್ಣ ಪದಕ ಗೆದ್ದುಕೊಂಡಿತು.

## ಬಾಂಗ್ಲಾ ಬಗ್ಗುಬಡಿದು ಮೊದಲ ಟೆಸ್ಟ್ ಗೆದ್ದ ಭಾರತ



ಚೆನ್ನೈ: ಬಾಂಗ್ಲಾದೇಶ ವಿರುದ್ಧ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ ಇಂದು ಟೀಂ ಇಂಡಿಯಾ ಭರ್ಜರಿ ಗೆಲುವು ದಾಖಲಿಸಿದೆ. ಚೆನ್ನೈನ ಚೆಪಾಕ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ರೋಹಿತ್ ತಂಡ 280ರನ್‌ಗಳಿಂದ ಬಾಂಗ್ಲಾವನ್ನು ಬಗ್ಗುಬಡಿದು ಸರಣಿಯಲ್ಲಿ 1–0ರ ಮುನ್ನಡೆ ಗಳಿಸಿತು. 515ರನ್‌ಗಳ ಬೃಹತ್ ಗುರಿ ಪಡೆದ ಎದುರಾಳಿ ತಂಡ, 2ನೇ ಇನ್ನಿಂಗ್ಸ್‌ನಲ್ಲಿ 234ರನ್‌ಗಳಿಗೆ ಸರ್ವಪತನ ಕಂಡಿತು. ಮೊದಲ ಟೆಸ್ಟ್‌ನಲ್ಲಿ ಆಲ್‌ರೌಂಡರ್ ಪ್ರದರ್ಶನಕ್ಕಾಗಿ ಆರ್.ಅಶ್ವಿನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

## ಯುಪಿಎಸ್‌ಸಿ ಮಾದರಿಯಲ್ಲಿ ಕೆಪಿಎಸ್‌ಸಿ ಕಾರ್ಯನಿರ್ವಹಣೆ



ಬೆಂಗಳೂರು : ಕೆಪಿಎಸ್‌ಸಿ (ಕರ್ನಾಟಕ ಲೋಕ ಸೇವಾ ಆಯೋಗ) ದಲ್ಲಿಯೂ ಯುಪಿಎಸ್‌ಸಿ ಮಾದರಿ ಹಾಗೂ ನಿಗದಿತ ವೇಳಾಪಟ್ಟಿಯಂತೆ ಕಾರ್ಯನಿರ್ವಹಣೆ ಮಾಡುವ ಕುರಿತು ಸುಧಾರಣಾ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ಸರ್ಕಾರದ ವತಿಯಿಂದ ವಿವಿಧ ನೇಮಕಾತಿಗಳ ಪ್ರಗತಿ ಪರಿಶೀಲನೆ ನಡೆಸಿದ ಸಿಎಂ, ನೇಮಕಾತಿ ಪ್ರಕ್ರಿಯೆಗಳ ವಿಳಂಬದ ಕುರಿತು, ಕಾನೂನು ತೊಡಕುಗಳ ಕುರಿತು ಹಾಗೂ 371ಜೆ ಅಡಿ ಮೀಸಲಾತಿಗೆ ಸಂಬಂಧಿಸಿದ ಸವಾಲುಗಳ ಕುರಿತು ಸಭೆಯಲ್ಲಿ ಚರ್ಚಿಸಿದರು.

## ರಾಜ್ಯದಲ್ಲಿ ಸಿನಿಮಾ, ಸಾಂಸ್ಕೃತಿಕ ಕಾರ್ಯಕರ್ತರ ಕಾಯ್ದೆ ಜಾರಿ



ಬೆಂಗಳೂರು : ಚಿತ್ರಮಂದಿರಗಳು ಮಾರಾಟ ಮಾಡುವ ಟಿಕೆಟ್ ದರದ ಮೇಲೆ ಶೇ.1ರಿಂದ 2ರಷ್ಟು ಸೆಸ್ ಸಂಗ್ರಹಿಸಿ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪಿಸುವ ಕಾಯ್ದೆ ಜಾರಿಗೊಳಿಸಿ ಸರ್ಕಾರ ಅಧಿಸೂಚನೆ ಹೊರಡಿಸಿದೆ. ವಿಧಾನಸಭೆಯಲ್ಲಿ ಸರ್ವಾನುಮತದಿಂದ ಅಂಗೀಕಾರವಾದ ಈ ಮಸೂದೆಯನ್ನು ರಾಜ್ಯಪಾಲರು ಹೆಚ್ಚಿನ ವಿವರಣೆ ಕೋರಿ ವಾಪಸ್ ಕಳುಹಿಸಿದ್ದರು. ಬಳಿಕ ಸರ್ಕಾರ ವಿವರಣೆ ನೀಡಿದ್ದು, ರಾಜ್ಯಪಾಲರು ಮಸೂದೆಗೆ ಅಂಕಿತ ಹಾಕಿದ್ದಾರೆ. ಕಾಯ್ದೆ ಜಾರಿಗೊಳಿಸಿ ಅಧಿಸೂಚನೆ ಹೊರಡಿಸಿದೆ.

## ಸಂವಿಧಾನ, ಸಿಎಂ ಸ್ಥಾನಕ್ಕೆ ಅತಿಶಿ ಅಪಮಾನ: ವಿಪಕ್ಷ ಕಿಡಿ



ನವದೆಹಲಿ: ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಅತಿಶಿ ಅವರು ಸೋಮವಾರ ಅಧಿಕಾರ ವಹಿಸಿಕೊಂಡರು. ಈ ವೇಳೆ ದೆಹಲಿ ಸಿಎಂ ಕಚೇರಿಯಲ್ಲಿ ತಮ್ಮ ಕುರ್ಚಿಯ ಪಕ್ಕದಲ್ಲಿ ಇನ್ನೊಂದು ಖಾಲಿ ಕುರ್ಚಿಯನ್ನು ಇಟ್ಟುಕೊಂಡಿದ್ದು, ವಿಪಕ್ಷಗಳಾದ ಬಿಜೆಪಿ ಮತ್ತು ಕಾಂಗ್ರೆಸ್ ಟೀಕೆಗೆ ಗುರಿಯಾಗಿದೆ. ಸಿಎಂ ಅತಿಶಿ ಅವರು ಅಧಿಕೃತ ಸಿಎಂ ಕುರ್ಚಿಯಲ್ಲಿ ಕುಳಿತುಕೊಳ್ಳದೇ ಅದರ ಪಕ್ಕದಲ್ಲಿ ಇನ್ನೊಂದು ಕುರ್ಚಿಯಲ್ಲಿ ಆಸೀನರಾಗಿ ಮುಂದಿನ ಚುನಾವಣೆಯಲ್ಲಿ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರನ್ನು ಜನರು ಮತ್ತೆ ಆಯ್ಕೆ ಮಾಡಿದ ಬಳಿಕ ಅವರು ಈ ಖಾಲಿ ಕುರ್ಚಿ ಅಲಂಕರಿಸಲಿದ್ದಾರೆ ಎಂದು ಹೇಳಿದರು.

## ದ್ವಾರಕೀಶ್ ನೆನಪಿನಲ್ಲಿ ದಸರಾ ಚಲನಚಿತ್ರೋತ್ಸವ



ಮೈಸೂರು: ಅಕ್ಟೋಬರ್ 3ರಿಂದ ನಾಡಹಬ್ಬ ದಸರಾ ಮಹೋತ್ಸವದ ನಿಮಿತ್ತ ದಸರಾ ಚಲನಚಿತ್ರೋತ್ಸವ ನಡೆಯಲಿದ್ದು, ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳು ಉದ್ಘಾಟನೆ ಮಾಡಲಿದ್ದಾರೆ ಎಂದು ದಸರಾ ಚಲನಚಿತ್ರೋತ್ಸವದ ಉಪಸಮಿತಿ ವಿಶೇಷ ಅಧಿಕಾರಿ ಡಾ. ಬಸವರಾಜ್ ಮಾಹಿತಿ ನೀಡಿದರು. ಮೈಸೂರಿನ ಅರಣ್ಯ ಭವನದಲ್ಲಿ ದಸರಾ ಚಲನಚಿತ್ರೋತ್ಸವದ ಬಗ್ಗೆ ಮಾಹಿತಿ ನೀಡಿದ ಅವರು, ಅ. 3ರಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ದಸರಾ ಚಲನಚಿತ್ರೋತ್ಸವಕ್ಕೆ ಚಾಲನೆನೀಡಲಾಗುವುದು.

## ಧಾರವಾಡ ಕೃಷಿಮೇಳ: ಕೀಟಗಳಿಂದ ತಯಾರಿಸಿದ ಆಹಾರ ಪ್ರದರ್ಶನ



ಧಾರವಾಡ: ಇಲ್ಲಿನ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುತ್ತಿರುವ ಕೃಷಿಮೇಳಕ್ಕೆ ಸೋಮವಾರ ಜನಸಾಗರವೇ ಹರಿದುಬಂದಿತ್ತು. ಮೇಳದಲ್ಲಿ ವಿಸ್ಮಯಕಾರಿ ಕೀಟ ಪ್ರಪಂಚದ ಪ್ರದರ್ಶನ ಗಮನ ಸೆಳೆಯಿತು. ವಿಶ್ವವಿದ್ಯಾಲಯದ ಕೀಟಶಾಸ್ತ್ರ ವಿಭಾಗದಿಂದ ವಿವಿಧ ಕೀಟಗಳ ಜೀವನ ಚಕ್ರ, ವೈವಿಧ್ಯಗಳನ್ನು ತಿಳಿಸುವುದರ ಜೊತೆಗೆ ಕೀಟಗಳಿಂದ ತಯಾರಿಸಿದ ಆಹಾರ ಪದಾರ್ಥಗಳ ಪ್ರದರ್ಶನ ಏರ್ಪಡಿ ಸಲಾಗಿತ್ತು. ರೋಗ ಹರಡುವ ಮತ್ತು ಹರಡದ ಕೀಟಗಳು, ಅವುಗಳ ವಿಶೇಷತೆಗಳು ಹಾಗೂ ಇತರ ವಿವರಣೆಗಳನ್ನು ಕೃಷಿ ಮೇಳಕ್ಕೆ ಆಗಮಿಸಿದ ರೈತರಿಗೆ ಮಾಹಿತಿ ನೀಡಲಾಗುತ್ತಿದೆ.

## ಕೊಡಗಿನಲ್ಲಿ ಮರ ಕಡಿತ ನಿಯಂತ್ರಿಸುವಂತೆ ಅರ್ಜಿ: ನೋಟಿಸ್



ಬೆಂಗಳೂರು: ಕೊಡಗು ಜಿಲ್ಲೆಯ ಅರಣ್ಯ ಜಮೀನು, ಸರ್ಕಾರಿ ಜಮೀನು, ಪಶ್ಚಿಮಘಟ್ಟ ಪ್ರದೇಶ ಹಾಗೂ ಬಾಣೆ, ಜಮ್ಮಾ, ಜಾಗೀರು, ಉಂಬಳಿ ಜಮೀನಿನ ಹಿಡುವಳಿದಾರರ ಜಮೀನುಗಳಲ್ಲಿನ ಮರಗಳನ್ನು ಕಡಿಯುವುದನ್ನು ನಿರ್ಬಂಧಿಸುವಂತೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್) ಸಂಬಂಧ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತಕ್ಕೆ ಸೋಮವಾರ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿತು. ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಹಾಗೂ ನ್ಯಾಯಮೂರ್ತಿ ಕೆ.ವಿ. ಅರವಿಂದ್ ಅವರಿದ್ದ ವಿಭಾಗೀಯ ಪೀಠ ನಡೆಸಿತು.

## ಅಬಕಾರಿ ಕಚೇರಿಯಲ್ಲಿ ಗಾಂಜಾ, ಮದ್ಯದ ಬಾಟಲಿಗಳು



ಬೆಂಗಳೂರು : ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖೆ ಕಚೇರಿಗಳ ಮೇಲೆ ಲೋಕಾಯುಕ್ತ ನೇತೃತ್ವದ ಅಧಿಕಾರಿಗಳ ತಂಡ ದಾಳಿ ನಡೆಸಿದೆ. ಲೋಕಾಯುಕ್ತ ಬಿ.ಎಸ್ ಪಾಟೀಲ್, ಉಪಲೋಕಾಯುಕ್ತ ಬಿ. ವೀರಪ್ಪ ಅವರು ಖುದ್ದು ಯಶವಂತಪುರ ಹಾಗೂ ಮೈಸೂರು ರಸ್ತೆಯ ಬ್ಯಾಟರಾಯನಪುರ ಕಚೇರಿಗಳ ಮೇಲೆ ದಾಳಿ ನಡೆಸಿ ಲೋಕಾಯುಕ್ತರ ತಂಡವು ಪರಿಶೀಲಿಸಿದಾಗ ಸುಮಾರು 250 ಗ್ರಾಂ ಗಾಂಜಾ ಪತ್ತೆಯಾಗಿದೆ. ಅಲ್ಲದೆ, 10ಕ್ಕಿಂತ ಹೆಚ್ಚು ಮದ್ಯದ ಬಾಟಲಿಗಳು ಹಾಗೂ ಸಿಗರೇಟ್‌ಗಳು ದೊರೆತಿವೆ.

## ಆರ್‌ಎಸ್‌ಎಸ್‌ಗೆ ಪತ್ರ ಬರೆದ ಅರವಿಂದ್ ಕೇಜ್ರಿವಾಲ್



ನವದೆಹಲಿ: ಕಳೆದ ಮೂರು ದಿನಗಳ ಹಿಂದಷ್ಟೇ ಆರ್‌ಎಸ್‌ಎಸ್‌ಗೆ ಪಂಚ ಪ್ರಶ್ನೆ ಹಾಕಿದ್ದ ದೆಹಲಿ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್, ಬುಧವಾರ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದಿದ್ದಾರೆ. "ಬಿಜೆಪಿಯ ಇಂದಿನ ರಾಜಕಾರಣ ಮತ್ತು ಪಕ್ಷವು ಸಂಘವನ್ನು ನಡೆಸಿಕೊಳ್ಳುವ ರೀತಿ ಕಂಡು ನಿಮಗೆ ನೋವಾಗುತ್ತಿಲ್ಲವೇ" ಎಂದು ಪ್ರಶ್ನಿಸಿದ್ದಾರೆ. ವಯಸ್ಸಿನ ಕಾರಣ ಹಿರಿಯ ರಾಜಕಾರಣಿ ಎಲ್‌ಕೆ ಅಡ್ವಾಣಿ ಅವರನ್ನು ರಾಜಕೀಯದಿಂದ ನಿವೃತ್ತರಾಗುವಂತೆ ಮಾಡಲಾಯಿತು. ಆ ನಿಯಮ ಪ್ರಧಾನಿ ಮೋದಿ ಅವರಿಗೆ ಅನ್ವಯವಾಗುವುದಿಲ್ಲವೇ ಎಂದೆಲ್ಲಾ ಪ್ರಶ್ನೆ ಮಾಡಿದ್ದಾರೆ.

## ಭಾರತದ ಯಾವುದೇ ಭಾಗ ಪಾಕಿಸ್ಥಾನವಾಗಲ್ಲ–ಸುಪ್ರೀಂ



ನವದೆಹಲಿ: ನ್ಯಾಯಾಲಯದ ಕಲಾಪದ ವೇಳೆ ಮಹಿಳಾ ವಕೀಲರ ಬಗ್ಗೆ ಹಾಗೂ ಸಮುದಾಯವೊಂದು ನೆಲೆಸಿರುವ ಪ್ರದೇಶವನ್ನು ಪಾಕಿಸ್ತಾನ ಎಂಬುದಾಗಿ ಹೇಳಿಕೆ ನೀಡಿದ್ದ ಪ್ರಕರಣ ಸಂಬಂಧ ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ವೇದವ್ಯಾಸಾಚಾರ್ ಶ್ರೀಶಾನಂದ ಅವರು ಸಾರ್ವಜನಿಕವಾಗಿ ಕ್ಷಮೆಯಾಚಿಸಿರುವ ಬೆನ್ನಲ್ಲೇ ಈ ಪ್ರಕರಣದ ಸ್ವಯಂ ಪ್ರೇರಿತ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಮುಕ್ತಾಯಗೊಳಿಸಿದೆ. ಪ್ರಕರಣವೊಂದರ ಕುರಿತು ವಿಚಾರಣೆ ವೇಳೆ ನ್ಯಾಯಮೂರ್ತಿ ಶ್ರೀಶಾನಂದ ಒಂದು ಕೋಮಿನ ಬಾಹುಳ್ಯವಿರುವ ಪ್ರದೇಶವನ್ನು 'ಪಾಕಿಸ್ತಾನ' ಎಂಬುದಾಗಿ ಹೇಳಿಕೆ ನೀಡಿದ್ದರು.

## ಕುಸಿದ ಸ್ಥಳದಲ್ಲೇ ದುಪ್ಪಟ್ಟು ಎತ್ತರದ ಶಿವಾಜಿ ಪ್ರತಿಮೆ



ಮುಂಬೈ: ಸಿಂಧುದುರ್ಗ್ ಎಂಬಲ್ಲಿ ಕುಸಿದು ಬಿದ್ದ ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆಯ ಸ್ಥಳದಲ್ಲೇ ಅದಕ್ಕಿಂತ ದುಪ್ಪಟ್ಟು ಗಾತ್ರದ ಹೊಸ ಪ್ರತಿಮೆ ನಿರ್ಮಿಸಲು ಮಹಾರಾಷ್ಟ್ರ ಸರ್ಕಾರ ಮುಂದಾಗಿದ್ದು, ಟೆಂಡರ್ ಆಹ್ವಾನಿಸಿದೆ. ಹೊಸ ಪ್ರತಿಮೆಯನ್ನು 60 ಅಡಿ ಎತ್ತರದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ನಿರ್ಧರಿಸಲಾಗಿದ್ದು, ಈ ಕಾರ್ಯ ಪೂರ್ಣಗೊಳ್ಳಲು ಆರು ತಿಂಗಳ ಗಡುವು ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕುಸಿದು ಬಿದ್ದ ಕಂಚಿನ ಪ್ರತಿಮೆ 35 ಅಡಿ ಎತ್ತರವಿತ್ತು.

## ಜಾತಿಗಣತಿ ನಡೆಸದ ಕಾಂಗ್ರೆಸ್ ಮೀಸಲಾತಿ ವಿರೋಧಿ–ಮಾಯಾವತಿ



ಲಖನೌ: ಲೋಕಸಭೆಯಲ್ಲಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪಕ್ಷದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಬಿಎಸ್‌ಪಿ ಮುಖ್ಯಸ್ಥೆ ಮಾಯಾವತಿ, ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಮೀಸಲಾತಿ ಬಗ್ಗೆ ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ಅವರ ನಿಲುವು ಬೂಟಾಟಿಕೆಯಿಂದ ಕೂಡಿದ್ದು, ದ್ವಿಮುಖ ನೀತಿ ಅನುಸರಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಅಮೆರಿಕದಲ್ಲಿ ಮೀಸಲಾತಿ ಕುರಿತು ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಉಲ್ಲೇಖಿಸಿದ ಮಾಯಾವತಿ ಮೀಸಲಾತಿಯನ್ನು ರದ್ದುಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

## ಸನಾತನ ಧರ್ಮದ ಮೇಲಿನ ದಾಳಿ ಸಹಿಸಲ್ಲ–ಪವನ್ ಕಲ್ಯಾಣ್



ವಿಜಯವಾಡ: ತಿರುಪತಿ ತಿರುಮಲದ ಪ್ರಸಿದ್ಧ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದ ಪವಿತ್ರ ಪ್ರಸಾದ ಲಡ್ಡು ತಯಾರಿಕೆಯಲ್ಲಿ ಕಲಬೆರಕೆ ತುಪ್ಪ ಬಳಸಿದ ಹಿನ್ನೆಲೆಯಲ್ಲಿ 11 ದಿನಗಳ ಪ್ರಾಯಶ್ಚಿತ ಉಪವಾಸ ವ್ರತ ಕೈಗೊಂಡಿರುವ ನಟ ಹಾಗೂ ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ಇಂದು ವಿಜಯವಾಡದ ಕನಕದುರ್ಗಾ ದೇಗುಲಕ್ಕೆ ಭೇಟಿ ನೀಡಿ, ಮೆಟ್ಟಿಲು ತೊಳೆದು ಶುದ್ಧೀಕರಣ ಕಾರ್ಯದಲ್ಲಿ ಪಾಲ್ಗೊಂಡರು. ಇದೇ ವೇಳೆ, "ಜಾತ್ಯತೀತತೆ ಎಂಬುದು ಏಕಮುಖವಲ್ಲ. ಅದು ದ್ವಿಮುಖ ಮಾರ್ಗ. ಇದು ಎಲ್ಲ ಧರ್ಮಗಳಿಗೂ ಆಶ್ರಯ ನೀಡುತ್ತದೆ" ಎಂದು ಅವರು ಹೇಳಿದರು.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## '45' ಸೆಟ್‌ಗೆ ಮಹಾಮಂಡಲೇಶ್ವರ ಮಹಾರಾಜ್?



ಕರುನಾಡ ಚಕ್ರವರ್ತಿ ಡಾ||ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅಭಿನಯದ, ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಸೂರಜ್ ಪ್ರೊಡಕ್ಷನ್ಸ್ ಲಾಂಛನದಲ್ಲಿ ಶ್ರೀಮತಿ ಉಮಾ ರಮೇಶ್‌ರೆಡ್ಡಿ ಅವರು ನಿರ್ಮಿಸುತ್ತಿರುವ ಬಹು ನಿರೀಕ್ಷಿತ "45" ಚಿತ್ರದ ಚಿತ್ರೀಕರಣ ಬೆಂಗಳೂರಿನ ಕಂಠೀರವ ಸ್ಟುಡಿಯೋದಲ್ಲಿ ಬಿರುಸಿನಿಂದ ಸಾಗಿದೆ. ಚಿತ್ರೀಕರಣ ಸ್ಥಳಕ್ಕೆ ಆನಂದ ಪೀಠಾಧೀಶ್ವರ ಆಚಾರ್ಯ ಮಹಾಮಂಡಲೇಶ್ವರ ಅನಂತ ಶ್ರೀ ವಿಭೂಷಿತ ಶ್ರೀಬಾಲ್ಕಾನಂದ ಗುರೂಜಿ ಮಹಾರಾಜ್ ಅವರು ಭೇಟಿ ನೀಡಿ ಚಿತ್ರತಂಡದವರನ್ನು ಆಶೀರ್ವದಿಸಿ, ಚಿತ್ರಕ್ಕೆ ಶುಭ ಕೋರಿದ್ದಾರೆ. ಈ ಸಂದರ್ಭದಲ್ಲಿ ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ, ರಾಜ್ ಬಿ ಶೆಟ್ಟಿ, ನಿರ್ದೇಶಕ ಅರ್ಜುನ್‌ಜನ್ಯ ಉಪಸ್ಥಿತರಿದ್ದರು.

## 'ಭೈರಾದೇವಿ' ಅಕ್ಟೋಬರ್ 3ರಂದು ತೆರೆಗೆ..



ಶಮಿಕ ಎಂಟರ್‌ಪ್ರೈಸಸ್ ಲಾಂಛನದಲ್ಲಿ ರಾಧಿಕಾ ಕುಮಾರಸ್ವಾಮಿ ನಿರ್ಮಿಸಿ, ನಾಯಕಿಯಾಗಿ ನಟಿಸಿರುವ ಬಹು ನಿರೀಕ್ಷಿತ "ಭೈರಾದೇವಿ" ಸಿನಿಮಾ ಅಕ್ಟೋಬರ್ 3 ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಅದರ ಪೂರ್ವಭಾವಿಯಾಗಿ ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭ' ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ರಮೇಶ್ ಅರವಿಂದ್, ರಾಧಿಕಾ ಕುಮಾರಸ್ವಾಮಿ, ಅನು ಪ್ರಭಾಕರ್, ನಿರ್ದೇಶಕ ಶ್ರೀಜೈ, ನೃತ್ಯ ನಿರ್ದೇಶಕ ಮೋಹನ್, ಸಹ ನಿರ್ಮಾಪಕರಾದ ರವಿರಾಜ್, ಯಾದವ್ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಟ್ರೇಲರ್ ಬಿಡುಗಡೆ ನಂತರ ಮಾತನಾಡಿದ 'ರಾಧಿಕಾ, ನಿರ್ದೇಶಕ ಶ್ರೀಜೈ ನಮ್ಮ ಮನೆಗೆ ಬಂದು ಕಥೆ ಹೇಳಿದರು. ಕಥೆ ಇಷ್ಟವಾಗಿ, ಈ ಚಿತ್ರ ನಿರ್ಮಾಣಹಾಗೂ ನಟಿಸಲು ಒಪ್ಪಿಕೊಂಡೆ ಎಂದರು.

## ಮಾಜಿ ಪ್ರಧಾನಿಗಳಿಂದ ಸಿನಿಮಾ ಸಂಸ್ಥೆಗೆ ಚಾಲನೆ..

ಬಿಜಾಪುರ ಜಿಲ್ಲೆಯ ಮಾಜಿ ಶಾಸಕರಾದ 'ಡಾ.ದೇವಾನಂದ್ ಫೂ ಚವ್ಹಾಣ ಹಾಗೂ ಶ್ರೀಮತಿ ಸುನೀತಾ ದೇವಾನಂದ ಚವ್ಹಾಣ ಪುತ್ರಿ ಲತಾಶ್ರೀ ಡಿ.ಸಿ ಅವರು ಹರ್ಷಿಣಿ ಸಿನಿಮಾಸ್ ಎಂಬ ಚಿತ್ರ ನಿರ್ಮಾಣ ಸಂಸ್ಥೆ ಆರಂಭಿಸಿದ್ದಾರೆ. ಇತ್ತೀಚೆಗೆ ಈ ನೂತನ ನಿರ್ಮಾಣ ಸಂಸ್ಥೆಯನ್ನು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರು ಉದ್ಘಾಟಿಸಿ, ಲತಾಶ್ರೀ. ಡಿ.ಸಿ ಅವರ ಹೊಸ ಪ್ರಯತ್ನಕ್ಕೆ ಮನತುಂಬಿ ಆಶೀರ್ವದಿಸಿದರು. ಕನ್ನಡ ಚಿತ್ರರಂಗದಲ್ಲಿ ಸದಭಿರುಚಿಯ ಚಿತ್ರಗಳನ್ನು ನಿರ್ಮಾಣ ಮಾಡುವ ಆಶಯ ಹೊಂದಿರುವ ಹರ್ಷಿಣಿ ಸಿನಮಾಸ್ ಸಂಸ್ಥೆಯು ಮೊದಲ ಚಿತ್ರವಾಗಿ "ಕಿರುನಗೆ" ಚಿತ್ರವನ್ನು ನಿರ್ಮಿಸುತ್ತಿದೆ. "ಸತ್ಯಂ" ಸೇರಿದಂತೆ ಈಗಾಗಲೇ ನಾಲ್ಕು ಚಿತ್ರಗಳನ್ನು ನಿರ್ದೇಶಿಸಿರುವ ಅಶೋಕ್ ಕಡಬ "ಕಿರುನಗೆ" ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ. ಮಹಿಳಾ ಪ್ರಧಾನ ಈ ಚಿತ್ರಕ್ಕೆ ಲತಾಶ್ರೀ ಡಿ.ಸಿಕಥೆ ಬರೆದಿದ್ದಾರೆ.



## ಇಬ್ಬನಿ ತಬ್ಬಿದ ಇಳೆಗೆ ಚಿತ್ರ ರಸಿಕರು ಫಿದಾ..

ಪರಂವಃ ಸ್ಟುಡಿಯೋಸ್ ಲಾಂಛನದಲ್ಲಿ ಜಿ.ಎಸ್ ಗುಪ್ತ ಹಾಗೂ ರಕ್ಷಿತ್ ಶೆಟ್ಟಿ ನಿರ್ಮಿಸಿರುವ ಚಂದ್ರಜಿತ್ ಬೆಳ್ಳಿಯಪ್ಪ ನಿರ್ದೇಶನದ ಹಾಗೂ ವಿಹಾನ್, ಅಂಕಿತ ಅಮರ್, ಮಯೂರಿ ನಟರಾಜ್ ಅಭಿನಯದ ಸುಮಧುರ ಪ್ರೇಮಕಾವ್ಯ "ಇಬ್ಬನಿ ತಬ್ಬಿದ ಇಳೆಯಲಿ" ಚಿತ್ರ ಸೆಪ್ಟೆಂಬರ್ 5 ರಂದು ಬಿಡುಗಡೆಯಾಗಿತ್ತು. ಆರಂಭದಿಂದಲೂ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿದ್ದ ಈ ಚಿತ್ರ, ಬಿಡುಗಡೆಯಾದ ಮೇಲೂ ಎಲ್ಲರ ಪ್ರಶಂಸೆಗೆ ಪಾತ್ರವಾಗಿತ್ತು. ಆದರೆ ಬಿಡುಗಡೆಯ ಸಮಯದಲ್ಲಿ ಕಡಿಮೆ ಸ್ಕ್ರೀನ್‌ಗಳಲ್ಲಿ ತೆರೆ ಕಂಡಿತ್ತು.ಕುಟುಂಬ ಸಮೇತ ಚಿತ್ರಮಂದಿರಗಳಿಗೆ ಬರಲು ಆರಂಭಿಸಿದರು. ಚಿತ್ರಮಂದಿರಕ್ಕೆ ಜನರು ಬರುತ್ತಿಲ್ಲ ಎಂಬ ಮಾತನ್ನು "ಕೃಷ್ಣಂ ಪ್ರಣಯ ಸಖಿ" ಹಾಗೂ "ಭೀಮ" ಚಿತ್ರಗಳು ದೂರ ಮಾಡಿದ್ದವು. ಈಗ ಈ ಚಿತ್ರ ಸಹ ಸೇರ್ಪಡೆಯಾಗಿದೆ.











Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212